**ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಆಯುಕ್ತರವರ ಕಛೇರಿ,**
**ಹೊಸಸಾರ್ವಜನಿಕ ಕಛೇರಿ ಕಟಡ್ಡಗಳು, ನೃಪತುಂಗ ರಸ್ತೆ, ಬೆಂಗಳೂರು-01.**

ಸಂಖ್ಯೆ ಸಿ3(1)ಪ್ರಾಶಿ ಇತರೆ 16/2022-23 ದಿನಾಂಕ 19.06.2023

## ಜ್ಞಾಪನ

ವಿಷಯ:- ಗ್ರಾಮಪಂಚಾಯತ್ ಸದಸ್ಯರು ಮತ್ತು ಚುನಾಯಿತ ಸದಸ್ಯರನ್ನು ಅತಿಥಿ ಶಿಕ್ಷಕರಾಗಿ ನೇಮಕ ಮಾಡಿಕೊಳ್ಳದಂತೆ ಸೂಚನೆ

ಉಲ್ಲೇಖ:- ೧. ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ತುಮಕೂರು ಇವರ ಸಂಖ್ಯೆ ಇ3/ಅ.ಶಿ.ನೇ-14/23-24 ದಿನಾಂಕ 16/06/2023

2. ಈ ಕಛೇರಿಯ ಜ್ಞಾಪನ ಸಂಖ್ಯೆ ಎಂ3/ಮ.ಉ.ಯೋ/ಗ್ರಾ.ಪಂ. ಚು/ಅ.ಸಿ.ಮು/06/2020-21 ದಿನಾಂಕ 01.01.2022

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ ೦೧ ರ ಪತ್ರದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ದೊಡ್ಡರಾಂಪುರ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ ಈ ಶಾಲೆಗೆ ಪ್ರಸ್ತುತ ಗ್ರಾಮ ಪಂಚಾಯ್ತಿ ಸದಸ್ಯರಾಗಿರುವ ಶ್ರೀಮತಿ ಎಸ್. ಎಂ. ರಜನಿ ಇವರನ್ನು ಅತಿಥಿ ಶಿಕ್ಷಕರನ್ನಾಗಿ ನೇಮಕ ಮಾಡಿಕೊಳ್ಳುವ ಕುರಿತು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ, ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಚಿಕ್ಕನಾಯಕನಹಳ್ಳಿ ತಾಲ್ಲೂಕು ಇವರು ಸ್ಪಷ್ಟಿಕರಣ ನೀಡಲು ಕೋರಿರುತ್ತಾರೆಂದು ಉಪನಿರ್ದೇಶಕರು, ತುಮಕೂರು ಜಿಲ್ಲೆ ಇವರು ಸ್ಪಷ್ಟೀಕರಣ ನೀಡಲು ಕೋರಿರುತ್ತಾರೆ.

ಮುಂದುವರಿದು, 2023-24 ನೇ ಸಾಲಿನಲ್ಲಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ನೀಡಲಾದ ಷರತ್ತುಗಳಲ್ಲಿ ಗ್ರಾಮ ಪಂಚಾಯ್ತಿ ಸದಸ್ಯರಾಗಿರುವ ಮತ್ತು ಚುನಾಯಿತ ಸದಸ್ಯರನ್ನು ಅತಿಥಿ ಶಿಕ್ಷಕರಾಗಿ ನೇಮಕ ಮಾಡಿಕೊಳ್ಳಲು ಯಾವುದೇ ಷರತ್ತು ಇಲ್ಲವೆಂಬುದಾಗಿ ಉಲ್ಲೇಖಿಸಿರುವುದನ್ನು ಪರಿಶೀಲಿಸಲಾಗಿದೆ.

1993 ಕರ್ನಾಟಕ ಆಕ್ಟ್ 14] ಪಂಚಾಯತ್ ರಾಜ್ 12 (ಜಿ) ಪ್ರಕಾರ ರಾಜ್ಯ ಸರ್ಕಾರದ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ನಿಯಂತ್ರಣಕ್ಕೆಒಳಪಟ್ಟಿರುವ ಯಾವುದೇ ಸ್ಥಳೀಯ ಅಥವಾ ಯಾವುದೇ ಇತರ ಪ್ರಾಧಿಕಾರದಲ್ಲಿ ಯಾವುದೇ ಲಾಭದಾಯಕ ಹುದ್ದೆಯನ್ನು ಹೊಂದಿದ್ದರೆ ಸದಸ್ಯರಾಗಲು ಅನರ್ಹರಾಗುತಾರೆ ಎಂಬುದಾಗಿ ಸ್ಪಷ್ಟಪಡಿಸಲಾಗಿದೆ.

ಮುಂದುವರಿದು, ಚುನಾವಣೆಯಲ್ಲಿ ಸ್ಪರ್ಧಿಸಿ ಚುನಾಯಿತರಾದ ಅಕ್ಷರ ದಾಸೋಹ ಅಡುಗೆ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವ ಬಗ್ಗೆ ಹೊರಡಿಸಲಾದ ಉಲ್ಲೇಖ ೦2 ರ ಜ್ಞಾಪನದಲ್ಲಿನ ನೀಡಲಾದ ಸೂಚನೆಗಳನ್ನು ಕ್ಷೇತ್ರ ಮಟ್ಟದಲ್ಲಿ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ/ ಜಿಲ್ಲಾ ಉಪನಿರ್ದೇಶಕರು ಈ ಕುರಿತು ಗಮನಿಸದೇ ಅನಾವಶ್ಯಕವಾಗಿ ಪತ್ರ ವ್ಯವಹರಿಸಿರುವುದನ್ನು ತೀವ್ರವಾಗಿ ಪರಿಗಣಿಸಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳುವ ಸಂಬಂಧ ನೀಡಲಾದ ಷರತ್ತುಗಳನ್ನು ಪಾಲಿಸಿ ಮಾತ್ರ ನೇಮಕ ಮಾಡಿಕೊಳ್ಳಲು ತಿಳಿಸಿದೆ. ತಪ್ಪಿದಲ್ಲಿ ಷರತ್ತುಗಳನ್ನು ಪಾಲಿಸದ ಸಂಬಂಧಪಟ್ಟ ಶಾಲಾ ಮುಖ್ಯ ಶಿಕ್ಷಕರ ಸಹಿತ ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮಿತಿ ಅಧ್ಯಕರ ಮೇಲೆ ಚಾಲ್ತಿ ನಿಯಮಗಳಂತೆ ಕ್ರಮಕೈಗೊಳ್ಳದ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದೆಂದು ತಿಳಿಸಿದೆ.

ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಸ್ವಯಂ ವಿವೇಚನಾ ಅಧಿಕಾರ ಇರುವುದಿಲ್ಲ. ಸಮಿತಿ ಅಧ್ಯಕ್ಷರು ಕೂಡ ಸರ್ಕಾರ/ ಇಲಾಖೆ ನೀತಿ/ನಿಯಮಗಳನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ ಎಂಬುದಾಗಿ ಸ್ಪಷ್ಟಪಡಿಸಿದೆ.

ಇಂತಹ ಪ್ರಕರಣ ಇಲಾಖೆಯ ಗಮನಕ್ಕೆ ಬಂದ ಕೂಡಲೇ ಕ್ಷೇತ್ರ ಮಟ್ಟದ ಅಧಿಕಾರಿಗಳು ಕೂಡಲೇ ಚಾಲ್ತಿ ನಿಯಮಗಳನ್ನು ಉಲ್ಲೇಖಿಸಿ ಹಿಂಬರಹ ನೀಡಲು ಹಾಗೂ ಅಗತ್ಯವಿದ್ದಲ್ಲಿ ಪಂಚಾಯತ್ ರಾಜ್ ಅಧಿಕಾರಿಗಳನ್ನು ಸಂಪರ್ಕಿಸಿ ಅವರಿಂದಲೂ ಪಂಚಾಯತ್ ರಾಜ್ ನಿಯಮಗಳ ವಿವರಗಳನ್ನು ಪಡೆದು ಕ್ರಮವಹಿಸಲು ತಿಳಿಸಿದೆ.

**(ಡಾ. ವಿಶಾಲ್ ಆರ್)**
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ,

**ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ತುಮಕೂರು ಜಿಲ್ಲೆ, ತುಮಕೂರು**

ಪ್ರತಿ ಮಾಹಿತಿ ಹಾಗೂ ಅಗತ್ಯ ಅನುಪಾಲನೆಗಾಗಿ:-

1. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ)
2. ಶಾಲಾ ಶಿಕ್ಷಣ ಇಲಾಖೆ ಎಲ್ಲಾ ತಾಲ್ಲೂಕು/ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3. ಹಿರಿಯ ಸಹಾಯಕ ನಿರ್ದೇಶಕರು ಇ ಆಡಳಿತ ವಿಭಾಗ ಕೇಂದ್ರ ಕಛೇರಿ, ಇವರಿಗೆ ಇಲಾಖಾ ವೆಬ್ ಸೈಟ್‌ನಲ್ಲಿ ಆಳವಡಿಸುವುದಕ್ಕಾಗಿ
4. ಕಛೇರಿ ಪ್ರತಿ.